# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1337(1612)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಡಾ|| ವೈ. ಎ. ನಾರಾಯಣಸ್ವಾಮಿ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಹೆಬ್ಬಾಳ ಪೊಲೀಸ್ ಠಾಣೆ ಬಗ್ಗೆ

(ಅ) ಬೆಂಗಳೂರು ನಗರದ ಹೆಬ್ಬಾಳ ಪೊಲೀಸ್ ಠಾಣೆ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇಲ್ಲಿ ಹೊಸ ಠಾಣೆಯನ್ನು ನಿರ್ಮಿಸಲು ಸರ್ಕಾರ ಕೈಗೊಳ್ಳುವ ಕ್ರಮ ಏನು;

(ಆ) ಹೆಬ್ಬಾಳ ಕ್ಷೇತ್ರದ ನಾಗೇನ ಹಳ್ಳಿ, ವಾರ್ಡ್-22ರ ಕೆಲವು ಭಾಗಗಳು ಪುಲಕೇಶಿ ನಗರದ ಕೆ.ಜಿ.ಹಳ್ಳಿ ಠಾಣೆಗೆ ಸೇರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮೇಲ್ಕಂಡ ಭಾಗಗಳು ಹೆಬ್ಬಾಳ ವಿಧಾನಸಭಾ ಕ್ಷೇತ್ರಕ್ಕೆ ಬರುವುದರಿಂದ ಸದರಿ ಭಾಗಗಳನ್ನು ಹೆಬ್ಬಾಳ ಪೊಲೀಸ್ ಠಾಣೆಗೆ ತರಲಾಗುವುದೇ;

(ಈ) ತರುವುದಿದ್ದರೆ, ಯಾವಾಗಿನಿಂದ ಕಾರ್ಯರೂಪಕ್ಕೆ ಬರಲಿದೆ?